ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 498
ಸದಸ್ಯರ ಹೆಸರು : ಯು.ಬಿ. ವೆಂಕಟೇಶ
ಉತ್ತರಿಸುವ ದಿನಾಂಕ : 22-12-2022
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಅವರ ಅವಲಂಬಿತರಿಗೆ ನೀಡಲಾಗುತ್ತಿರುವ ಮಾಶಾಸನ ಇತರೆ ರಾಜ್ಯಗಳಿಗೆ ಹೋಲಿಸಿದರೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ	ಸ್ವಾತಂತ್ರ್ಯ ಹೋರಾಟಗಾರರಿಗೆ ಪಿಂಚಣಿ ಸೌಲಭ್ಯದ ಜೊತೆಗೆ ನೀಡುತ್ತಿರುವ ಇತರೆ ಸೌಲಭ್ಯಗಳೇನು;	• ಗೌರವಧನ/ಪಿಂಚಣಿ ಪಡೆಯುತ್ತಿರುವ ಸ್ವಾತಂತ್ರ್ಯ ಹೋರಾಟಗಾರರು ಮರಣ ಹೊಂದಿದಲ್ಲಿ, ಅವರ ವಿಧವಾ ಪತ್ನಿ ಅಥವಾ ಪತಿಗೆ ಅಥವಾ ಅವರ ಅಪ್ರಾಪ್ತ ವಯಸ್ಕ ಮಕ್ಕಳಿಗೆ ಕುಟುಂಬ ಗೌರವ ಧನ/ಪಿಂಚಣಿಯನ್ನು ಮಂಜೂರು ಮಾಡಲಾಗುತ್ತಿದೆ. • ರಾಜ್ಯದ ವ್ಯಾಪ್ತಿಯಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸಲು ಸ್ವಾತಂತ್ರ್ಯ ಹೋರಾಟಗಾರರಿಗೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ ವಿಧವಾ ಪತ್ನಿಯರಿಗೆ ಜೀವಿತಾವಧಿಗೆ ಉಚಿತ ಬಸ್ ಪಾಸ್ ವಿತರಿಸಲಾಗುತ್ತಿದೆ. • ಸ್ವಾತಂತ್ರ್ಯ ಯೋಧರು ಮರಣ ಹೊಂದಿದಲ್ಲಿ ಅವರ ಶವಸಂಸ್ಕಾರಕ್ಕಾಗಿ ರೂ. 4,000/- ಗಳನ್ನು ಶವಸಂಸ್ಕಾರ ಭತ್ಯೆಯಾಗಿ ನೀಡಲಾಗುತ್ತಿದೆ.
ಇ	ಪಿಂಚಣಿ ಹೆಚ್ಚಳ ಮಾಡುವಂತೆ ಕೋರಿ ಹಲವು ವರ್ಷಗಳಿಂದ ಬೇಡಿಕೆ ಸಲ್ಲಿಸುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಈ	ಬಂದಿದ್ದಲ್ಲಿ, ಈ ಕುರಿತು ಕ್ರಮ ಕೈಗೊಳ್ಳಲಾಗುವುದೇ?	ರಾಜ್ಯ ಸ್ವಾತಂತ್ರ್ಯ ಹೋರಾಟಗಾರರಿಗೆ ಮಾಸಿಕವಾಗಿ ನೀಡಲಾಗುತ್ತಿರುವ ರೂ. 10,000/- ಗಳ ಗೌರವಧನವನ್ನು ರೂ. 15,000/- ಗಳಿಗೆ ಹೆಚ್ಚಿಸುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಕಡತ ಸಂಖ್ಯೆ: ಕಂಇ/45/ಪಿಎಫ್‌ಜಿ/2022

(ಆರ್. ಅಶೋಕ)
ಕಂದಾಯ ಸಚಿವರು